# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.06.2024 / 14.30 hrs**

ಮುಖ್ಯಾಂಶಗಳು

೧. **ಮಾನಸಿಕ ಶಾಂತಿ, ಭಾವನಾತ್ಮಕ ತೃಪ್ತಿ ನೀಡಲು ಯೋಗ ಸಹಕಾರಿ - ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್**

೨. **೧೦ನೇ ಅಂತಾರಾಷ್ಟ್ರೀಯ ಯೋಗ ದಿನ; ರಾಜ್ಯಾದ್ಯಂತ ವಿವಿಧ ಕಾರ್ಯಕ್ರಮ; ಯೋಗದ ಕುರಿತು ಜಾಗೃತಿ**

೩. **ವಿಜಯನಗರ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ; ಅಧಿಕಾರಿಗಳ ಕಾರ್ಯವೈಖರಿಗೆ ಅಸಮಾಧಾನ**

೪. **ನೈಸರ್ಗಿಕ ವಿಕೋಪ ನಿರ್ವಹಣೆಗೆ ೩ ಸಾವಿರದ ೫೦೦ ಕೋಟಿ ರೂಪಾಯಿ ಯೋಜನೆ; ೨೦೨೫ರ ಮಾರ್ಚ್‌ನಿಂದ ಜಾರಿ**

**<><*<><>*><>**

೧೦ನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ವಿಶ್ವಾದ್ಯಂತ ಇಂದು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. "ಸ್ವಂತ ಮತ್ತು ಸಮಾಜಕ್ಕಾಗಿ ಯೋಗ" ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ. ಯೋಗ, ಮಾನಸಿಕವಾಗಿ ಶಾಂತಿ ಹಾಗೂ ಭಾವನಾತ್ಮಕವಾಗಿ ತೃಪ್ತಿ ನೀಡುತ್ತದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ವಿಧಾನಸೌಧದ ಮುಂಭಾಗದಲ್ಲಿ ಆಯುಷ್ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ೧೦ನೇ ಅಂತಾರಾಷ್ಟ್ರೀಯ ಯೋಗದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನಗೊಳಿಸಲು ಯೋಗ ಉತ್ತಮ ಮಾರ್ಗವಾಗಿದೆ. ಯೋಗವು ಭಾರತೀಯ ಸಂಪ್ರದಾಯ ಮತ್ತು ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದೆ ಎಂದರು. ತಾವು ಸ್ವತಃ ಯೋಗಪಟುವಾಗಿದ್ದು, ಪ್ರತಿ ದಿನ ಯೋಗ ಹಾಗೂ ಪ್ರಾಣಾಯಾಮ ಮಾಡುವುದಾಗಿ ತಿಳಿಸಿದ ಅವರು, ಸಾರ್ವಜನಿಕರೆಲ್ಲರೂ ಯೋಗಾಭ್ಯಾಸವನ್ನು ತಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಅದರ ಸಕಾರಾತ್ಮಕ ಪರಿಣಾಮಗಳನ್ನು ಅನುಭವಿಸಿ, ಇತರರನ್ನು ಯೋಗ ಮಾಡುವಂತೆ ಪ್ರೇರೇಪಿಸಬೇಕೆಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲರೊಂದಿಗೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಬಳ್ಳಾರಿಯಲ್ಲಿಂದು ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾರ್ಮಿಕ ಸಚಿವ ಸಂತೋಷ್ ಲಾಡ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸಂಸದ ಈ.ತುಕಾರಾಂ, ಸರ್ಕಾರದ ಕಾರ್ಯದರ್ಶಿ ತ್ರಿಲೋಕ್ ಚಂದ್ರ ಮತ್ತಿತರರು ಪಾಲ್ಗೊಂಡಿದ್ದರು.

**<><*<><>*><>**

೧೦ನೇ ಅಂತಾರಾಷ್ಟ್ರೀಯ ಯೋಗ ದಿನದ ಹಿನ್ನೆಲೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿಂದು ವಿಶೇಷ ಯೋಗ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸಂಸದರು, ಶಾಸಕರು ಸೇರಿದಂತೆ ಹಲವು ಗಣ್ಯರು ಯೋಗಾಭ್ಯಾಸದಲ್ಲಿ ತೊಡಗಿ, ಯೋಗದ ಪ್ರಯೋಜನದ ಕುರಿತು ಅರಿವು ಮೂಡಿಸುವ ಜೊತೆಗೆ ಇತರರಿಗೂ ಪ್ರೇರಣೆಯಾಗಿದ್ದಾರೆ. ಬೆಳಗಾವಿಯಲ್ಲಿ ಆಯೋಜಿಸಿದ್ದ ಯೋಗ ಕಾರ್ಯಕ್ರಮದಲ್ಲಿ ಸಂಸದ ಜಗದೀಶ್ ಶೆಟ್ಟರ್ ಪಾಲ್ಗೊಂಡು, ಆರೋಗ್ಯಕರ ಬದುಕಿಗೆ ಯೋಗ ಅತ್ಯಗತ್ಯ. ಪ್ರತಿದಿನವು ಯೋಗ ಮಾಡುವುದರಿಂದ ಮನಸ್ಸಿನ ಹಾಗೂ ದೇಹದ ಆರೋಗ್ಯ ಉತ್ತಮ ಪಡಿಸಿಕೊಳ್ಳಬಹುದು. ಇಂದಿನ ಯುವ ಪೀಳಿಗೆ ತಮ್ಮ ದಿನಚರಿಯಲ್ಲಿ ಯೋಗ ಪದ್ಧತಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಆರು ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವಿರುವ ಯೋಗ ಅಭ್ಯಾಸ ಮಾಡುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಉತ್ತಮವಾಗುತ್ತದೆ ಎಂದು ಕೇಂದ್ರ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಯೋಗ ಭಾರತದ ಪರಂಪರೆಯ ಅತಿ ಮಹತ್ವದ ಕೊಡುಗೆಯಾಗಿದೆ ಎಂದರು. ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ಪತಂಜಲಿ ಯೋಗ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಜಿಲ್ಲಾ ಸರ್.ಎಂ.ವಿ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ೧೦ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಯೋಗದ ಆಸನಗಳನ್ನು ಮಾಡುವ ಮೂಲಕ ಉದ್ಘಾಟಿಸಿದರು.

ಬಾಗಲಕೋಟೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ೧೦ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿತ್ತು. ಸಂಸದ ಪಿ.ಸಿ.ಗದ್ದಿಗೌಡರ ಅಂತಾರಾಷ್ಟ್ರೀಯ ಯೋಗ ದಿನವನ್ನು ಉದ್ಘಾಟಿಸಿ ಮಾತನಾಡಿ, ಯೋಗ ಕೇವಲ ಒಂದು ದಿನದ ಆಚರಣೆಯಾಗದೆ ನಿತ್ಯ ಜೀವನದ ಭಾಗವಾಗಬೇಕು. ಯೋಗದಿಂದ ಮಾನಸಿಕ ಒತ್ತಡ, ಆರೋಗ್ಯದ ಏರುಪೇರು ಹೀಗೆ ಹಲವಾರು ರೋಗಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದರು.

ಯೋಗ ಪ್ರತಿಯೊಬ್ಬರ ದೈನಂದಿನ ಭಾಗವಾದಾಗ ರೋಗ ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ದಾವಣಗೆರೆ ಲೋಕಸಭಾ ಸದಸ್ಯೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದ್ದಾರೆ. ನಗರದ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿಂದು ಹಮ್ಮಿಕೊಂಡಿದ್ದ ೧೦ ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. **
೧೦ನೇ ಅಂತರರಾಷ್ಟ್ರೀಯ ಯೋಗ ದಿನವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ನೆಲಮಂಗಲ ಹಾಗೂ ಹೊಸಕೋಟೆ ತಾಲ್ಲೂಕುಗಳಲ್ಲಿ ಸ್ಥಳೀಯ ಆಡಳಿತ ಹಾಗೂ ವಿವಿಧ ಯೋಗ ಸಂಸ್ಥೆಗಳ ನೇತೃತ್ವದಲ್ಲಿಂದು ಆಚರಿಸಲಾಯಿತು. ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ್ ಚಾಲನೆ ನೀಡಿ ಮಾತನಾಡಿ, ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಯೋಗ ಉತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರು ಯೋಗಾಭ್ಯಾಸ ಮಾಡುವುದನ್ನು ದಿನನಿತ್ಯದ ಚಟುವಟಿಕೆಗಳಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ ವತಿಯಿಂದ ನಗರದ ಅಶೋಕ ಪೈ ಸ್ಮಾರಕ ಕಾಲೇಜಿನಲ್ಲಿ ಯೋಗ ಕುರಿತು ಜನಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಕಲಬುರಗಿಯನ್ನು ಸ್ವಾಸ್ಥ್ಯ ಮತ್ತು ಆರೋಗ್ಯವಂತ ಜಿಲ್ಲೆ ಮಾಡುವ ನಿಟ್ಟಿನಲ್ಲಿ ಯೋಗಾಭ್ಯಾಸ ದೈನಂದಿನ ಜೀವನಶೈಲಿಯಾಗಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಕರೆ ನೀಡಿದ್ದಾರೆ. ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ "ಸ್ವಂತ ಮತ್ತು ಸಮಾಜಕ್ಕಾಗಿ ಯೋಗ" ಧ್ಯೇಯವಾಕ್ಯದ ೧೦ನೇ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಚಿಕ್ಕಮಗಳೂರು ಜಿಲ್ಲಾಡಳಿತ, ಆಯುಷ್ ಇಲಾಖೆ ಹಾಗು ವಿವಿಧ ಇಲಾಖೆಗಳ ಸಹಯೋಗದಲ್ಲಿ ಇಂದು ನಗರದ ಜಿಲ್ಲಾ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಯೋಗ ದಿನಾಚರಣೆ ನಡೆಯಿತು. ಶಾಸಕ ಹೆಚ್.ಡಿ ತಮ್ಮಯ್ಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಭಾರತ ಧ್ಯಾನ ಮತ್ತು ಯೋಗ ವಿಷಯದಲ್ಲಿ ಈಡೀ ಪ್ರಪಂಚದ ಗಮನ ಸೆಳೆದಿದ್ದು ಹಲವು ರಾಷ್ಟ್ರಗಳು ನಮ್ಮ ದೇಶದ ಯೋಗ ಪರಂಪರೆಯನ್ನು ಅಳವಡಿಸಿಕೊಳ್ಳುತ್ತಿವೆ ಎಂದರು.

<><*<><>*><>

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಂದು ವಿಜಯನಗರ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈವೇಳೆ ಮಾತನಾಡಿದ ಅವರು, ರಾಜ್ಯಸರ್ಕಾರದಿಂದ ೧೩೦ ಕೋಟಿ ರೂಪಾಯಿಯ ಸಂಪೂರ್ಣ ಬರ ಪರಿಹಾರ ಮೊತ್ತವನ್ನು ಜಿಲ್ಲೆಗೆ ಈಗಾಗಲೇ ವಿತರಿಸಲಾಗಿದೆ. ಬೆಳೆ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ನಡೆಸಿ, ಬೆಳೆ ನಷ್ಟ ಅನುಭವಿಸಿರುವ ಎಲ್ಲಾ ರೈತರ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ಪರಿಹಾರದ ಹಣ ಜಮೆ ಮಾಡಲಾಗಿದೆ ಎಂದರು. ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಪರಿಹಾರ ನೀಡಲು ವಿಳಂಬವಾಗಿರುವ ಕುರಿತು ಅಸಮಾಧಾನ ವ್ಯಕ್ತಪಡಿದ ಅವರು, ತ್ವರಿತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ಕ್ರಮ ವಹಿಸಬೇಕು, ಇಲ್ಲವಾದಲ್ಲಿ ಅಧಿಕಾರಿಗಳನ್ನು ನೇರವಾಗಿ ಹೊಣೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು. ಜಿಲ್ಲೆಯ ಕುಡಿಯುವ ನೀರಿನ ನಿರ್ವಹಣೆ ಕುರಿತು ಅಕ್ಷೇಪ ವ್ಯಕ್ತಪಡಿಸಿದ ಅವರು, ೫೨ ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ಥಿ ಕೈಗೊಳ್ಳದಿರುವ ಕುರಿತು ಅಧಿಕಾರಿಗಳನ್ನು ಪ್ರಶ್ನಿಸಿದರು. ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಶೈಕ್ಷಣಿಕವಾಗಿ ಜಿಲ್ಲೆ ೧೦ನೇ ಸ್ಥಾನದಿಂದ ೨೭ನೇ ಸ್ಥಾನಕ್ಕೆ ಕುಸಿದಿರುವ ಕುರಿತು ಬೇಸರ ವ್ಯಕ್ತಪಡಿಸಿದ ಮುಖ್ಯಮಂತ್ರಿ ಸಭೆಯ ನಡುವೆಯೇ ಶಿಕ್ಷಣ ಇಲಾಖೆ ಕಾರ್ಯದರ್ಶಿ ರಿತೀಶ್ ಅವರಿಗೆ ಕರೆ ಮಾಡಿ, ಸಾರ್ವಜನಿಕ ಶಿಕ್ಷಣದ ಉಪನಿರ್ದೇಶಕರು ಹಾಗೂ ಸಂಬಂಧಿತ ಶಿಕ್ಷಣಾಧಿಕಾರಿಗಳನ್ನು ಅಮಾನತುಗೊಳಿಸುವಂತೆ ಆದೇಶಿಸಿದರು.

<><*<><>*><>

ಮುಂಬರುವ ಸಾಮಾನ್ಯ ಬಜೆಟ್‌ಗೆ ಮುನ್ನ ದೆಹಲಿಯಲ್ಲಿ ಇಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ರೈತ ಸಂಘಗಳ ಪ್ರತಿನಿಧಿಗಳು ಮತ್ತು ಕೃಷಿ ಅರ್ಥಶಾಸ್ತ್ರಜ್ಞರೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು. ಸಭೆಯಲ್ಲಿ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಹಣಕಾಸು ಕಾರ್ಯದರ್ಶಿ ಟಿ.ವಿ.ಸೋಮನಾಥನ್, ಮುಖ್ಯ ಆರ್ಥಿಕ ಸಲಹೆಗಾರ ವಿ. ಅನಂತ ನಾಗೇಶ್ವರನ್, ಆರ್ಥಿಕ ವ್ಯವಹಾರಗಳ ಕಾರ್ಯದರ್ಶಿ ಮತ್ತು ಕೃಷಿ ಸಚಿವಾಲಯದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ನಿರ್ಮಲಾ ಸೀತಾರಾಮನ್ ಅವರು, ಹಣಕಾಸು ಮತ್ತು ಬಂಡವಾಳ

ಮಾರುಕಟ್ಟೆ ವಲಯದ ಪ್ರಮುಖ ತಜ್ಞರು, ಉದ್ಯಮ ಮುಖಂಡರು ಮತ್ತು ಸಂಘಗಳು ಹಾಗೂ ಪ್ರಮುಖ ಅರ್ಥಶಾಸ್ತ್ರಜ್ಞರೊಂದಿಗೆ ಬಜೆಟ್ ಪೂರ್ವ ಸಭೆಗಳನ್ನು ನಡೆಸಿದ್ದರು.

**<><*<><>*><>**

ನೈಸರ್ಗಿಕ ವಿಕೋಪ ನಿರ್ವಹಣಾ ಕ್ಷೇತ್ರದಲ್ಲಿ ವಿಶ್ವಬ್ಯಾಂಕ್ ೨ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ವಿಶ್ವಬ್ಯಾಂಕ್, ಬಿಬಿಎಂಪಿ ಹಾಗೂ ಜಲಮಂಡಳಿಯ ಪ್ರತಿನಿಧಿಗಳೊಂದಿಗೆ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಸಚಿವರು ಪಾಲ್ಗೊಂಡು ಮಾತನಾಡಿದರು. ವಿಪತ್ತು ನಿರ್ವಹಣೆಯ ಉನ್ನತೀಕರಣಕ್ಕಾಗಿ ಒಟ್ಟು ೩ ಸಾವಿರದ ೫೦೦ ಕೋಟಿ ವೆಚ್ಚದ ಹೊಸ ಯೋಜನೆಯನ್ನು ರೂಪಿಸಲಾಗಿದ್ದು, ವಿಶ್ವಬ್ಯಾಂಕ್ ನಿಂದ ೨ ಸಾವಿರ ಕೋಟಿ ರೂಪಾಯಿ ಹೂಡಿಕೆಯ ಜೊತೆಗೆ ರಾಜ್ಯ ಸರ್ಕಾರವೂ ಒಂದು ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚ ಮಾಡಲಿದೆ. ಈ ಯೋಜನೆ ೨೦೨೫ರ ಮಾರ್ಚನಲ್ಲಿ ಪೂರ್ಣ ಪ್ರಮಾಣದಲ್ಲಿ ಜಾರಿಗೆ ಬರಲಿದೆ ಎಂದರು.

**<><*<><>*><>**

ಹಾವೇರಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ತುಂಗಾ ಮೇಲ್ದಂಡೆ ಯೋಜನೆ, ಹಾಲು ಉತ್ಪಾದನಾ ಘಟಕ, ರೈತ ಉತ್ಪಾದನೆಗಳು  ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೆ  ತರಲಾಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿ ಜಿಲ್ಲೆಯ ರಾಣೆಬೆನ್ನೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನಲ್ಲಿ ಎರಡು ನೀರಾವರಿ ಯೋಜನೆಗಳು ಹೋಳೆಆನ್ವೇರಿ ಮತ್ತು ಮೇಡ್ಲೆರಿ ಭಾಗದಲ್ಲಿ ಆಗಬೇಕಾಗಿದೆ. ಉದ್ಯೋಗ ಸೃಷ್ಟಿಗೆ ಜವಳಿ ಮತ್ತಿತರ ಕಾರ್ಖಾನೆಗಳು ನಿರ್ಮಿಸಬೇಕಾಗಿದ್ದು, ರೈಲ್ವೆ ಯೋಜನೆ ವಿಸ್ತೀರ್ಣಗೊಂಡು ರಸಗೊಬ್ಬರ ಮೆಕ್ಕೆಜೋಳ ಇಲ್ಲಿಂದಲೇ ಸರಬರಾಜು ಆಗಬೇಕಾಗಿದೆ ಈ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದರು.

**<><*<><>*><>**

ಗದಗ ಜಿಲ್ಲೆಯಲ್ಲಿ ಕೊಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ತಂಬಾಕು ನಿಷೇಧ ಕೋಶದ  ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೋಟ್ಪಾ ೨೦೦೩ ಕಾಯ್ದೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು, ಶಾಲಾಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಆವರಣದಿಂದ ೧೦೦ ಗಜದವರೆಗೆ ತಂಬಾಕು ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಕಠಿಣ ಕಾನೂನು ರೀತಿ ಕ್ರಮ ಕೈಗೊಂಡು ತಂಬಾಕು ಮಾರಾಟ ಮಾಡುವುದನ್ನು ನಿಷೇಧಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**